ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 106 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 13.02.2023 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯ ಮಕ್ಕಳ ಮತ್ತು ತಾಯಿಯ ಆಸ್ಪತ್ರೆಯಲ್ಲಿ ಬೆಡ್‌ಗಳ ಹಾಗೂ ವೈದ್ಯರುಗಳು ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ವಿಜಯಪುರ ಜಿಲ್ಲೆಯ ತಾಯಿ ಮತ್ತು ಮಕ್ಕಳ ಆಸ್ಪತ್ರೆಯು 100 ಹಾಸಿಗೆಗಳ ಸಾಮರ್ಥ್ಯವಿದೆ. ಮುಂದುವರೆದು 2019-20ನೇ ಸಾಲಿನ ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿ ಆಸ್ಪತ್ರೆಯ ಸಾಮರ್ಥ್ಯವನ್ನು 100 ರಿಂದ 150 ಹಾಸಿಗೆಗೆ ಹೆಚ್ಚಿಸಲು ಕ್ರಮಕೈಗೊಳ್ಳಲಾಗಿದೆ.<br><br>ಕೇಂದ್ರ ಸರ್ಕಾರದ MNH Toolkit 2013 ಮಾರ್ಗಸೂಚಿ ಅನ್ವಯ ವಿಜಯಪುರ ಜಿಲ್ಲೆಯ ಮಕ್ಕಳ ಮತ್ತು ತಾಯಿ ಆಸ್ಪತ್ರೆಗೆ 16 ತಜ್ಞ ವೈದ್ಯರುಗಳ ಸೇವೆ ಅಗತ್ಯವಿರುತ್ತದೆ. ಪ್ರಸ್ತುತ 20 ತಜ್ಞ ವೈದ್ಯರುಗಳು ಕಾರ್ಯನಿರ್ವಹಿಸುತ್ತಿದ್ದಾರೆ. |
| ಆ) | ಈ ಆಸ್ಪತ್ರೆಗೆ ಹೆಚ್ಚಾಗಿ ಸ್ಥಳೀಯರು ಹೊರಜಿಲ್ಲೆ ಹಾಗೂ ಹೊರರಾಜ್ಯಗಳಿಂದ ಮಕ್ಕಳ ಚಿಕಿತ್ಸೆಗಾಗಿ ಹಾಗೂ ಹೆರಿಗೆ ಸಲುವಾಗಿ ಆಗಮಿಸುತ್ತಿರುವುದರಿಂದ ಒತ್ತಡ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಇ) | ಆಸ್ಪತ್ರೆಗಳಲ್ಲಿರುವ ಒಟ್ಟು ಬೆಡ್ಡಳ ಸಂಖ್ಯೆ ಎಷ್ಟು: ಬೆಡ್‌ಗಳ ಸಂಖ್ಯೆಗಳನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ಪ್ರಸ್ತುತ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಹಾಸಿಗೆಗಳ ಸಂಖ್ಯೆ:100. |
| ಈ) | ಹೊಸ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | 2019-20ನೇ ಸಾಲಿನಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಆಸ್ಪತ್ರೆಯ ಹಾಸಿಗೆ ಸಾಮರ್ಥ್ಯವನ್ನು 100 ರಿಂದ 150 ಕ್ಕೆ ಹೆಚ್ಚಿಸಲಾಗಿದೆ. ಕಟ್ಟಡ ಕಾಮಗಾರಿಯು ಮುಕ್ತಾಯದ ಹಂತದಲ್ಲಿರುತ್ತದೆ. |

ಆಕುಕ 01 ಎಸ್‌ಬಿವಿ 2023

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು